ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಕೆ.ಎನ್.ನಾಗೇಗೌಡ (ಬೃಹತ್ ನೀರಾವರಿ ಸಚಿವರು): ಈ ದಿನದ ಲಿಖಿತ ಮೂಲಕ ಉತ್ತರಿಸುವ 3ನೇ ಪ್ರಶ್ನೆಗಳ ಪಟ್ಟಿಯ ಒಟ್ಟು 20 ಪ್ರಶ್ನೆಗಳ ಪೈಕಿ 19 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಗಂಗಾ ಕಲ್ಯಾಣ ಯೋಜನೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳು

95 (80)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಗಂಗಾಕಲ್ಯಾಣ ಯೋಜನೆಯಲ್ಲಿ ವ್ಯಾಪಕ ಅವ್ಯವಹಾರ ನಡೆದಿರುವುದು ಸರ್ಕಾರದದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಅವ್ಯವಹಾರದ ಮೊತ್ತ ಎಷ್ಟು? ಯಾವ ಪ್ರದೇಶದಲ್ಲಿ ಈ ಅವ್ಯವಹಾರ ನಡೆದಿದೆ?

ಇ) ಸದರಿ ಅವ್ಯವಹಾರಕ್ಕೆ ಕಾರಣರಾದವರು ಯಾರು? ಇವರ ವಿರುದ್ಧ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ.ಎಂ.ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಮಾಗಡಿ ತಾಲ್ಲೂಕಿನಲ್ಲಿ ಅಂಬೇಡ್ಕರ್ ಭವನ ನಿರ್ಮಾಣ

96 (81)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಮಾಡುವ ಯೋಜನೆ ಸರ್ಕಾರದವರ ಪರಿಶೀಲನೆಯಲ್ಲಿದೆಯೇ?